ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

24

ಇಲಾಖೆ / ವಿಷಯ : DEPARTMENT / SUBJECT: ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE : 9/9/2020

# ಉಪಕರಣಗಳ ಖರೀದಿ ಅವ್ಯವಹಾರ: ವರದಿ ಸಿದ್ಧ

9/9/20

**ಬೆಂಗಳೂರು:** ಕರೋನಾ ಉಪಕರಣಗಳ ಖರೀದಿ ಅವ್ಯವಹಾರ ಆರೋಪ ಸಂಬಂಧ, ಸಾರ್ವಜನಿಕ ಲೆಕ್ಕ ಪತ್ರ ಸಮಿತಿ ತನ್ನ ವರದಿಯನ್ನು ಅಂತಿಮಗೊಳಿಸಿದ್ದು, ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿಗೆ ವರದಿ ಸಲ್ಲಿಕೆಗೆ ಸಿದ್ಧತೆ ನಡೆಸಲಾಗಿದೆ. ಮಾಜಿ ಸಚಿವ ಎಚ್.ಕೆ.ಪಾಟೀಲ್ ಅಧ್ಯಕ್ಷತೆ ಸಮಿತಿಯಲ್ಲಿ ಶಾಸಕರಾದ ರಮೇಶ್ ಕುಮಾರ್, ಮುರುಗೇಶ್ ನಿರಾಣಿ, ಎಚ್.ಡಿ.ರೇವಣ್ಣ, ಸಿ.ಎಂ.ಇಬ್ರಾಹಿಂ, ಶಾಸಕ ಎ.ಎಸ್.ಪಾಟೀಲ್, ವಿಧಾನಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಸೇರಿದಂತೆ 20 ಸದಸ್ಯರಿದ್ದಾರೆ. ಕೋವಿಡ್ ಉಪಕರಣಗಳ ಖರೀದಿಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರ ಕುರಿತು ದೂರು ಕೇಳಿಬಂದ ಹಿನ್ನೆಲೆಯಲ್ಲಿ ಸಮಿತಿ ಅಧ್ಯಕ್ಷ ಎಚ್.ಕೆ.ಪಾಟೀಲ್, ಕಳೆದ ನಾಲ್ಕು ತಿಂಗಳಿನಿಂದ ನಿರಂತರ ಸಭೆ ನಡೆಸಿ ವಿಚಾರಣೆ ನಡೆಸಿದ್ದರು.